# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮ ಪಂಚಾಯಿತಿಗಳ ಲೆಕ್ಕ ಪರಿಶೋಧನೆಯನ್ನು ಆನ್‌ಲೈನ್ ತಂತ್ರಾಂಶದ ಮೂಲಕ ನಿರ್ವಹಿಸುವ ಬಗ್ಗೆ.

**ಓದಲಾಗಿದೆ:**

1. ಭಾರತ ಸರ್ಕಾರದ ಪಂಚಾಯತ್ ರಾಜ್ ಸಚಿವಾಲಯದ ಪತ್ರ ಸಂಖ್ಯೆ: 19011/5/2020–3–Panchayat ದಿನಾಂಕ: 15.04.2020.
2. ಭಾರತ ಸರ್ಕಾರದ ಪಂಚಾಯತ್ ರಾಜ್ ಸಚಿವಾಲಯದ ಪತ್ರ ಸಂಖ್ಯೆ: 19011/5/2020 E–ಪಂಚಾಯತ್ ದಿನಾಂಕ: 01.05.2020.
3. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ ಇವರ ಪ್ರಸ್ತಾವನೆಯ ಕಡತ ಸಂಖ್ಯೆ: RDPR 31 AFN 2020 (E-Office).
4. ಆರ್ಥಿಕ ಇಲಾಖೆಯ ಆಡಳಿತ ಶಾಖೆಯ ಕಡತ ಸಂಖ್ಯೆ: ಆಇ 99 SAD 2020 (E-Office)

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರಗಳನ್ವಯ 15ನೇ ಹಣಕಾಸು ಆಯೋಗದ ಶಿಫಾರಸ್ಸಿನ ಆಧಾರದ ಮೇಲೆ ಪಂಚಾಯತ್ ರಾಜ್ ಮಂತ್ರಾಲಯ, ನವದೆಹಲಿ ಇವರು ಸ್ಥಳೀಯ ಸಂಸ್ಥೆಗಳ ಲೆಕ್ಕ ಪರಿಶೋಧನೆಯಲ್ಲಿ ಏಕರೂಪತೆ ತರಲು ಹಾಗೂ ನಿಗಧಿತ ಅವಧಿಯಲ್ಲಿ ಲೆಕ್ಕಪತ್ರಗಳ ಲೆಕ್ಕ ಪರಿಶೋಧನೆಯನ್ನು ಕೈಗೊಳ್ಳಲು ವೆಬ್ ಆಧಾರಿತ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಿದ್ದು, ಸದರಿ ತಂತ್ರಾಂಶದ ಮೂಲಕ ಆನ್ ಲೈನ್ ಲೆಕ್ಕಪರಿಶೋಧನೆ ಕೈಗೊಳ್ಳಲು ರಾಜ್ಯ ಸರ್ಕಾರಕ್ಕೆ ಸೂಚಿಸಿರುತ್ತಾರೆ.

ಮುಂದುವರೆದು, ವೆಬ್ ಆಧಾರಿತ ತಂತ್ರಾಂಶದ ಬಗ್ಗೆ, ದಿ:15.04.2020ರಂದು ನಡೆದ ವಿಡಿಯೋ ಸಂವಾದದ ನಿರ್ಣಯಗಳು ಈ ಕೆಳಕಂಡಂತೆ ತೆಗೆದುಕೊಳ್ಳಲಾಗಿದೆ.

i. Providing inputs / comments / suggestions by the States on the draft Audit Manual by 22nd April 2020.
ii. Selection of at least 20% of GPs to be audited during 2020-21.
iii. Forwarding of contact details of Nodal Officers (from NIC and PR Dept) and Director LFA.
iv. Completion of training of the officials involved in audit by the States by 15th May 2020.

ಮುಂದುವರೆದು, ದಿ:27-29, ಏಪ್ರಿಲ್ 2020 ರಂದು ಎಲ್ಲಾ ರಾಜ್ಯಗಳ ಅಧಿಕಾರಿಗಳಿಗೆ ಆನ್ ಲೈನ್ ಅಧಿವೇಶನಗಳ (Online Sessions) ಮೂಲಕ ತರಬೇತಿಯನ್ನು ನೀಡಲಾಗಿರುತ್ತದೆ. ಹಾಗೂ ಈ ಕೆಳಕಂಡ ವೇಳಾಪಟ್ಟಿಯಂತೆ ಕ್ರಮ ವಹಿಸಲು ಸೂಚಿಸಲಾಗಿದೆ.

| Sl.No | Activities | Timeline |
|---|---|---|
| 1 | Closure of Annual Book of Accounts of all GPs in PRIA soft | 30th April, 2020 |
| 2 | Registration of Auditors on Audit Online | 1st May, 2020 |
| 3 | Preparation of Audit Plan | 30th June, 2020 |
| 4 | Completion of entire exercise of Online Audit of Panchayat accounts | 31st Oct, 2020 |

ಈಗ, ಆನ್ ಲೈನ್ ತಂತ್ರಾಂಶದ ಮೂಲಕ ಲೆಕ್ಕ ಪರಿಶೋಧನೆಯನ್ನು ನಿರ್ವಹಿಸುವ ಕುರಿತು ತರಬೇತಿ ನೀಡಬೇಕಾಗಿದ್ದು, ವಿತ್ತೀಯ ಕಾರ್ಯನೀತಿ ಸಂಸ್ಥೆ (FPI) ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಹಯೋಗದೊಂದಿಗೆ ತರಬೇತಿ ನೀಡಲು ಹಾಗೂ ಈ ತಂತ್ರಾಂಶದ ಮೂಲಕವೇ ಲೆಕ್ಕ ಪರಿಶೋಧನೆಯನ್ನು ಕೈಗೊಳ್ಳಲು ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ ಇವರಿಗೆ ಸೂಚಿಸಲು, 20% ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡುವ ಪ್ರಕ್ರಿಯೆ ಕುರಿತಂತೆ ರಾಜ್ಯದ ಎಲ್ಲಾ 30 ಜಿಲ್ಲಾ ಪಂಚಾಯಿತಿಗಳಿಂದ (ಈ ಸಾಲಿನಲ್ಲಿ 40 ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಲು) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯು ಸಲ್ಲಿಸಿರುವ ಪ್ರಸ್ತಾವನೆಯ ಬಗ್ಗೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 151 ವೆಚ್ಚ-6/2020, ದಿನಾಂಕ: 17.07.2020**

ವಿತ್ತೀಯ ಕಾರ್ಯನೀತಿ ಸಂಸ್ಥೆ (FPI) ಯು ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಯೋಗದೊಂದಿಗೆ ಆನ್‌ಲೈನ್ ತಂತ್ರಾಂಶದ ಮೂಲಕ ಲೆಕ್ಕ ಪರಿಶೋಧನೆಯ ತರಬೇತಿಯನ್ನು ಸಂಬಂಧಪಟ್ಟ ಅಧಿಕಾರಿ / ಸಿಬ್ಬಂದಿಗಳಿಗೆ ಈ ಆದೇಶ ಹೊರಡಿಸಿದ ದಿನಾಂಕದಿಂದ ಒಂದು ತಿಂಗಳೊಳಗಾಗಿ ನೀಡುವುದು ಹಾಗೂ ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆರವರು ರಾಜ್ಯದ 30 ಜಿಲ್ಲಾ ಪಂಚಾಯತ್‌ಗಳು ಶೇಕಡಾ 20ರಷ್ಟು ಗ್ರಾಮ ಪಂಚಾಯತಿಗಳನ್ನು ಗುರುತಿಸಿ ಆಯ್ಕೆ ಮಾಡಿ

ಕೇಂದ್ರ ಸರ್ಕಾರದ ಆನ್‌ಲೈನ್ ತಂತ್ರಾಂಶವನ್ನೇ ಬಳಸಿ ಲೆಕ್ಕ ಪರಿಶೋಧನೆಯನ್ನು ದಿನಾಂಕ: 31.10.2020ರೊಳಗೆ ಕಡ್ಡಾಯವಾಗಿ ಕೈಗೊಂಡು ಈಗಾಗಲೇ ನಿಗಧಿಪಡಿಸಲಾಗಿರುವ ವೇಳಾಪಟ್ಟಿಯಂತೆ ಪೂರ್ಣಗೊಳಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಬಿ.ಹೆಚ್.ಪುರುಷೋತ್ತಮ್ ಸಿಂಗ್)

ವಿಶೇಷಾಧಿಕಾರಿ(ಜಿ.ಪಂ.)

ಆರ್ಥಿಕ ಇಲಾಖೆ

1. ಮಹಾಲೇಖಪಾಲರು (ಎ&ಇ) ಲೆಕ್ಕ ಪರಿಶೋಧನೆ 1 ಮತ್ತು 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿರಾಜ್ ಇಲಾಖೆ.
4. ಪ್ರಧಾನ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ವಿತ್ತೀಯ ಕಾರ್ಯನೀತಿ ಸಂಸ್ಥೆ, ಬೆಂಗಳೂರು.
6. ಅಪರ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
7. ಆರ್ಥಿಕ ಇಲಾಖೆ ಆಡಳಿತ ಶಾಖೆಯ ಕಡತಕ್ಕೆ
8. ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ